ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ರಸ್ತೆ ಕಾಮಗಾರಿಯಲ್ಲಿ ಕೋಟ್ಯಾಂತರ ರೂಪಾಯಿ ಅವ್ಯವಹಾರದ ಬಗ್ಗೆ

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1133 (1203) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಕೆಸರೊಳ್ಳಿಯಿಂದ ತೇರಗಾಂವ ಗ್ರಾಮದವರಿಗೆ ಮುಖ್ಯ ರಸ್ತೆ ಕಾಮಗಾರಿ ಪ್ರಾರಂಭಗೊಂಡು ಸಂಪೂರ್ಣ ಹಾಳಾಗಿದ್ದು, ಇದಕ್ಕೆ ಕೋಟ್ಯಾಂತರ ರೂಪಾಯಿ ಅವ್ಯವಹಾರವಾಗಿದ್ದು ಸರ್ಕಾರ ಕೂಡಲೇ ಕ್ರಮಕೈಗೊಳ್ಳುವುದೇ; (ವಿವರ ನೀಡುವುದು)

(ಆ) ಸದರಿ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು; ಗುತ್ತಿಗೆ ನೀಡುವಲ್ಲಿ ಅನುಸರಿಸಿರುವ ಮಾನದಂಡವೇನು; ಕಾಮಗಾರಿಯ ಗುಣಮಟ್ಟವನ್ನು ಪರೀಕ್ಷೆ ಮಾಡಲಾಗಿತ್ತೇ; ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿರಲು ಕಾರಣವೇನು;

(ಇ) ರಸ್ತೆಯ ಗುಣಮಟ್ಟ ಹಾಗೂ ಮಣ್ಣು ಪರೀಕ್ಷೆ ಮಾಡಲಾಗಿದೆಯೇ; ರಸ್ತೆ ಕಾಮಗಾರಿ ಮುಗಿದ 15 ದಿವಸದಲ್ಲೇ ರಸ್ತೆ ಹಾಳಾಗಲು ಕಾರಣವೇನು;

(ಈ) ಮಂಜೂರಾದ ಮಾರ್ಗ ಹಾಗೂ ಅಂದಾಜು ಪಟ್ಟಿಯ ಪ್ರಕಾರ ಕಾಮಗಾರಿ ನಡೆದಿದೆಯೇ; (ಕಾಮಗಾರಿ ಪೂರ್ಣ ವಿವರದ ಮಾಹಿತಿ ನೀಡುವುದು)

(ಉ) ಸದರಿ ಕಾಮಗಾರಿಯಲ್ಲಿ ಕೋಟ್ಯಾಂತರ ರೂಪಾಯಿ ಅವ್ಯವಹಾರ ಆಗಿರುವುದರಿಂದ ಎಷ್ಟು ದಿನದಲ್ಲಿ ಸಂಬಂಧಿಸಿದವರ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು; ಸದರಿ ವಿಷಯದಲ್ಲಿ ನಿಷ್ಕಾಳಜಿ ಮಾಡಿದ್ದಲ್ಲಿ ಮುಂದೆ ಕೋಟ್ಯಾಂತರ ರೂಪಾಯಿಯ ಅಭಿವೃದ್ಧಿ ಕಾಮಗಾರಿಯ ಅನುದಾನ ಇದೇ ರೀತಿ ಅವ್ಯವಹಾರಕ್ಕೆ ಆಸ್ಪದ ಮಾಡಿಕೊಟ್ಟಂತಾಗುವುದಿಲ್ಲವೇ?